# ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**15.02.2026** **2.30 p.m.**

**<><><><>**

ಮುಖ್ಯಾಂಶಗಳು

1. ರಾಜ್ಯಾದ್ಯಾಂತ ಶ್ರದ್ಧಾ-ಭಕ್ತಿಯಿಂದ ಮಹಾ ಶಿವರಾತ್ರಿ ಆಚರಣೆ ; ದೇಗುಲಗಳಲ್ಲಿ ವಿಶೇಷ ಪೂಜೆ
2. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂತ ಸೇವಾ ಲಾಲರ ಜಯಂತಿ ಆಚರಣೆ
3. ಕಾಣೆಯಾಗಿದ್ದ ರಾಜ್ಯದ ವಿದ್ಯಾರ್ಥಿ ಶ್ರೀನಿವಾಸಯ್ಯ ಕ್ಯಾಲಿಫೋರ್ನಿಯಾದಲ್ಲಿ ಶವವಾಗಿ ಪತ್ತೆ
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಎ ಗುಂಪಿನ ಪಂದ್ಯದಲ್ಲಿಂದು ಸಾಂಪ್ರದಾಯಿಕ ಎದುರಾಳಿಗಳಾದ ಭಾರತ-ಪಾಕಿಸ್ತಾನ ಮುಖಾಮುಖಿ

<><><><>

ರಾಜ್ಯಾದ್ಯಂತ ಇಂದು ಮಹಾಶಿವರಾತ್ರಿಯನ್ನು ಶ್ರದ್ಧೆ, ಭಕ್ತಿ ಮತ್ತು ಸಡಗರದಿಂದ ಆಚರಿಸಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕ ಗಣ್ಯರು ರಾಜ್ಯದ ಜನತೆಗೆ ಮಹಾಶಿವರಾತ್ರಿಯ ಶುಭಾಶಯ ಕೋರಿದ್ದಾರೆ. ಕೋಲಾರ ಜಿಲ್ಲೆಯಾದ್ಯಂತ ಮಹಾಶಿವರಾತ್ರಿಯನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಗುತ್ತಿದೆ. ಶಿವಭಕ್ತರು ಶಿವಪೂಜೆಯಲ್ಲಿ ತೊಡಗಿದ್ದಾರೆ. ಶಿವಾಲಯಗಳಲ್ಲಿ ಇಂದು ಬೆಳಗಿನಿಂದಲೇ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ನಡೆಯುತ್ತಿವೆ. ಕೋಲಾರ ಜಿಲ್ಲೆಯ ಪ್ರಮುಖ ಧಾರ್ಮಿಕ ಕೇಂದ್ರವಾದ ಕೋಟಿಲಿಂಗೇಶ್ವರ ದೇವಾಲಯದಲ್ಲಿ ಪ್ರತಿಷ್ಠಾಪಿಸಿರುವ ೧೦೮ ಅಡಿ ಎತ್ತರದ ಶಿವಲಿಂಗಕ್ಕೆ ದೀಪಾಲಂಕಾರ ಮಾಡಲಾಗಿದ್ದು, ವಿವಿಧ ಬಗೆಯ ಹೂಗಳಿಂದ ಶೃಂಗರಿಸಲಾಗಿದೆ. ಶಿವನ ಎದುರು ೩೫ ಅಡಿ ಎತ್ತರದ ನಂದಿ ವಿಗ್ರಹ ದೇವಾಲಯದ ವಿಶೇಷವಾಗಿದೆ. ಬೆಳಗ್ಗೆಯಿಂದಲೇ ವಿವಿಧೆಡೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸುತ್ತಿದ್ದು, ಶಿವಲಿಂಗಗಳ ದರ್ಶನ ಪಡೆಯುತ್ತಿದ್ದಾರೆ. ಶಿವರಾತ್ರಿ ಹಿನ್ನೆಲೆಯಲ್ಲಿ ಜಾಗರಣೆ, ಉಪವಾಸಗಳನ್ನು ಕೈಗೊಳ್ಳಲಾಗುತ್ತಿದ್ದು, ರಾತ್ರಿಯಿಡಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಹ ಏರ್ಪಡಿಸಲಾಗಿದೆ. ಮಹಾಶಿವರಾತ್ರಿ ಹಬ್ಬವನ್ನು ಇಂದು ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಅತ್ಯಂತ ಶ್ರದ್ಧಾ-ಭಕ್ತಿಗಳಿಂದ ಆಚರಿಸಲಾಗುತ್ತಿದೆ. ಚಿಕ್ಕಬಳ್ಳಾಪುರ ತಾಲೂಕಿನ ಇತಿಹಾಸ ಪ್ರಸಿದ್ಧ ನಂದಿ ಗ್ರಾಮದ ಭೋಗ ನಂದೀಶ್ವರ ದೇವಾಲಯದಲ್ಲಿ ಭೋಗ ನಂದೀಶ್ವರ ಸ್ವಾಮಿ ಮೂರ್ತಿಗೆ

ವಿಶೇಷ ಪುಷ್ಪಾಲಂಕಾರ, ಪೂಜೆ, ನೈವೇದ್ಯ, ತೀರ್ಥ ಪ್ರಸಾದ ವಿನಿಯೋಗಗಳು ನಡೆಯುತ್ತಿದೆ. ನಂದಿಬೆಟ್ಟದ ಯೋಗ ನಂದೀಶ್ವರ ದೇವಾಲಯದಲ್ಲಿಯೂ ಮಹಾಶಿವರಾತ್ರಿಯ ವಿಶೇಷ ಪೂಜೆ ಮತ್ತು ಧಾರ್ಮಿಕ ಕೈಂಕರ್ಯಗಳು ಜರುಗುತ್ತಿವೆ. ಹಬ್ಬದ ಪ್ರಯುಕ್ತ ಇಂದು ವಿವಿಧ ಜಿಲ್ಲೆಗಳು ಹಾಗೂ ನೆರೆಯ ಆಂಧ್ರ ಪ್ರದೇಶ, ತೆಲಂಗಾಣ ಮತ್ತು ತಮಿಳುನಾಡು ರಾಜ್ಯಗಳಿಂದ ಸಾವಿರಾರು ಭಕ್ತರು ಭೋಗ ನಂದೀಶ್ವರ ಮತ್ತು ಯೋಗ ನಂದೀಶ್ವರ ದೇವರ ದರ್ಶನಕ್ಕೆ ಆಗಮಿಸುತ್ತಿದ್ದಾರೆ. ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಇಂದು ನಂದಿ ಮತ್ತು ನಂದಿಬೆಟ್ಟದಲ್ಲಿ ಜಾಗರಣೆ ಹಾಗೂ ಜಾತ್ರಾ ಮಹೋತ್ಸವ ನಡೆಯಲಿದ್ದು, ಶಿವನಾಮ ಸ್ಮರಣೆ, ಭಜನೆ, ಪೌರಾಣಿಕ ನಾಟಕಗಳು ನಡೆಯಲಿವೆ. ಅನ್ನ ಸಂತರ್ಪಣೆ ಕೂಡ ಹಮ್ಮಿಕೊಳ್ಳಲಾಗಿದೆ. ಹಬ್ಬದ ಮಾರನೆಯ ದಿನವಾದ ನಾಳೆ ಜೋಡಿ ಬ್ರಹ್ಮರಥೋತ್ಸವ ನೆರವೇರಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಸೇರುವ ನಿರೀಕ್ಷೆಯಿದೆ. ನಂದಿ ಜಾತ್ರೆ ಮತ್ತು ಮಹೋತ್ಸವದ ಅಂಗವಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ, ದೇವನಹಳ್ಳಿ, ಬೆಂಗಳೂರು, ನೆಲಮಂಗಲ, ದೊಡ್ಡಬಳ್ಳಾಪುರ ನಗರಗಳಿಂದ ವಿಶೇಷ ಬಸ್ ವ್ಯವಸ್ಥೆ ಮಾಡಿದೆ. ಉತ್ತ ಕನ್ನಡ ಜಿಲ್ಲೆಯ ಪುರಾಣ ಪ್ರಸಿದ್ಧ ಗೋಕರ್ಣ ಮಹಾಬಲೇಶ್ವರ, ಮುರುಡೇಶ್ವರ, ಯಾಣ, ಸಹಸ್ರಲಿಂಗಗಳಲ್ಲಿ ಭಕ್ತರು ಮಹಾಶಿವರಾತ್ರಿಯನ್ನು ಅತ್ಯಂತ ಭಕ್ತಿಯಿಂದ ಆಚರಿಸುತ್ತಿದ್ದಾರೆ. ಪುರಾಣ ಪ್ರಸಿದ್ಧ ಕ್ಷೇತ್ರ ಗೋಕರ್ಣದಲ್ಲಿ ಶಿವರಾತ್ರಿ ಅಂಗವಾಗಿ ಸಾವಿರಾರು ಭಕ್ತರು ಉತ್ಸಾಹದಲ್ಲಿ ಪೂಜೆಯಲ್ಲಿ ಪಾಲ್ಗೊಂಡಿದ್ದಾರೆ. ಜಿಲ್ಲೆ, ಹೊರಜಿಲ್ಲೆ ಹಾಗೂ ಹೊರ ರಾಜ್ಯಗಳಿಂದಲೂ ಸಹ ಭಕ್ತರು ಗೋಕರ್ಣ ಮಹಾಬಲೇಶ್ವರನ ದರ್ಶನಕ್ಕೆ ಆಗಮಿಸುತ್ತಿದ್ದಾರೆ. ಕೋಟಿತೀರ್ಥದಲ್ಲಿ ಸ್ನಾನ ಮಾಡಿ, ನಿನ್ನೆ ಮಧ್ಯರಾತ್ರಿಯಿಂದಲೇ ಮಹಾಗಣಪತಿ ಮತ್ತು ಮಹಾಬಲೇಶ್ವರನ ಪೂಜೆಗಾಗಿ ಸರತಿ ಸಾಲಿನಲ್ಲಿ ಭಕ್ತರು ನಿಂತು, ಬೆಳಗಿನ ಜಾವದಿಂದ ಪೂಜೆ ಅರ್ಪಿಸುತ್ತಿದ್ದಾರೆ. ಇನ್ನು ಮುರುಡೇಶ್ವರ, ಯಾಣ, ಸಹಸ್ರಲಿಂಗಗಳಿಗೂ ಭಕ್ತರು ತೆರಳಿ ಪೂಜೆ ಸಲ್ಲಿಸುತ್ತಿದ್ದಾರೆ. ಗದಗ ಜಿಲ್ಲಾದ್ಯಂತ ಮಹಾಶಿವರಾತ್ರಿಯನ್ನು ಶ್ರಧ್ಧಾ-ಭಕ್ತಿಯಿಂದ ಆಚರಿಸಲಾಗುತ್ತಿದೆ. ಗದಗ ನಗರದ ಐತಿಹಾಸಿಕ ಪ್ರಸಿದ್ಧ ಶ್ರೀ ತ್ರಿಕೋಟೇಶ್ವರ ದೇವಸ್ಥಾನ, ಲಕ್ಷ್ಮೇಶ್ವರ ಪಟ್ಟಣದ ಶ್ರೀ ಸೋಮೇಶ್ವರ ದೇವಲಯ, ಬೆಟಗೇರಿಯ ಶ್ರೀ ರಾಮಲಿಂಗೇಶ್ವರ ಸೇರಿದಂತೆ ಅನೇಕ ಶಿವಾಲಯಗಳಲ್ಲಿ ಮಹಾಶಿವರಾತ್ರಿ ಅಂಗವಾಗಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಜರುಗುತ್ತಿದೆ. ಸಹಸ್ರಾರು ಭಕ್ತಾಧಿಗಳು ಶಿವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸುತ್ತಿದ್ದಾರೆ. ರಾಜ್ಯದ ಪ್ರಮುಖ ಯಾತ್ರಾಸ್ಥಳವಾದ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವವು

ಕಳೆಗಟ್ಟಿದ್ದು, ನಾಡಿನ ನಾನಾ ಭಾಗಗಳಿಂದ ಸಹಸ್ರಾರು ಮಂದಿ ಭಕ್ತರು ಮಹದೇಶ್ವರನ ದರ್ಶನ ಪಡೆದು, ವಿವಿಧ ಸೇವೆ ಸಲ್ಲಿಸುತ್ತಿದ್ದಾರೆ. ಚಾಮರಾಜನಗರದ ಐತಿಹಾಸಿಕ ಚಾಮರಾಜೇಶ್ವರ ದೇಗುಲದಲ್ಲಿ ಪವಿತ್ರ ಗಂಗಾಜಲದಿಂದ ಅಭಿಷೇಕ ನೇರವೇರಿಸಿ, ಸಹಸ್ರಲಿಂಗ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಕೊಳ್ಳೇಗಾಲದ ಮರಳೇಶ್ವರ, ಗುಂಡ್ಲುಪೇಟೆಯ ರಾಮೇಶ್ವರ ಸೇರಿ ಜಿಲ್ಲೆಯ ಶಿವನ ದೇಗುಲಗಳಿಗೆ ಭಕ್ತರು ಆಗಮಿಸಿ, ಶಿವರಾತ್ರಿ ವಿಶೇಷ ಪೂಜೆ ಸಲ್ಲಿಸಿದರು. ಧಾರವಾಡದ ಶ್ರೀನಗರದಲ್ಲಿರುವ ಶಿವಾಲಯ ದೇವಸ್ಥಾನದಲ್ಲಿ ಮಹಾಶಿವರಾತ್ರಿ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗುತ್ತಿವೆ. ಭಕ್ತರು ಜಲಾಭಿಷೇಕ ಹಾಗೂ ಲಿಂಗಸ್ಪರ್ಶ ಮಾಡುವ ಮೂಲಕ ದೇವರ ಕೃಪೆಗೆ ಪಾತ್ರರಾಗುತ್ತಿದ್ದಾರೆ. ಹಾವೇರಿ ಜಿಲ್ಲಾದ್ಯಂತ ಇಂದು ಮಹಾಶಿವರಾತ್ರಿ ಹಬ್ಬವನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಗುತ್ತಿದೆ. ಹಾವೇರಿಯ ಐತಿಹಾಸಿಕ ದೇವಾಲಯ ಪುರಸಿದ್ದೇಶ್ವರ ದೇವಸ್ಥಾನದಲ್ಲಿ ಬೆಳಿಗ್ಗೆಯಿಂದ ರುದ್ರಾಭಿಷೇಕ, ರುದ್ರಪಾರಾಯಣ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಗಳು ನಡೆಯುತ್ತಿವೆ. ಸಿಂದಗಿಮಠ ಸೇರಿದಂತೆ ವಿವಿಧ ಮಠಗಳಲ್ಲಿ ವಿಶೇಷ ಪೂಜೆ, ಹೋಮ ಹವನ ಹಾಗೂ ಅಭಿಷೇಕ ನಡೆಯುತ್ತಿವೆ. ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ಶಿವಾಲಯವನ್ನೂ ದೀಪಗಳಿಂದ ಅಲಂಕರಿಸಲಾಗಿದ್ದು, ವಿಶೇಷ ಪಾರ್ಥನೆಗಳು ಜರಗುತ್ತಿವೆ. ಭಕ್ತರು ಶಿವಾಲಯಗಳಿಗೆ ತೆರಳಿ, ಪ್ರಾರ್ಥನೆ ಸಲ್ಲಿಸಿ, ದೇವರ ದರ್ಶನ ಪಡೆಯುತ್ತಿದ್ದಾರೆ. ದೇವನಗರಿ ದಾವಣಗೆರೆಯಲ್ಲಿ ಶಿವರಾತ್ರಿ ಹಬ್ಬದ ಸಡಗರ ಇಮ್ಮಡಿಗೊಂಡಿದೆ. ನಗರದ ಈಶ್ವರ ದೇವಸ್ಥಾನ, ಪಂಚ ಲಿಂಗೇಶ್ವರ, ಪಾತಾಳ ಲಿಂಗೇಶ್ವರ, ಕನ್ನಿಕಾ ಪರಮೇಶ್ವರಿ ದೇವಾಲಯಗಳಲ್ಲಿ ರುದ್ರಾಭಿಷೇಕ, ಇಷ್ಟಲಿಂಗ ಪೂಜೆ ಮೊದಲಾದ ಧಾರ್ಮಿಕ ಕಾರ್ಯಕ್ರಮಗಳು ಮುಂಜಾನೆಯಿಂದಲೇ ನಡೆಯುತ್ತಿವೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ಸಂತ ಸೇವಾಲಾಲ್ ಜಯಂತಿ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಸಂತ ಸೇವಾಲಾಲರ ಜಯಂತಿ ಕಾರ್ಯಕ್ರಮವನ್ನು ಶಾಸಕ ಧೀರಜ್ ಮುನಿರಾಜು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬಂಜಾರ ಸಮುದಾಯದ ಸೇವಾಲಾಲರು ವೀರನಾಗಿ, ವಿರಾಗಿಯಾಗಿ, ಶ್ರೇಷ್ಠ ದಾರ್ಶನಿಕನಾಗಿ ಮತ್ತು ಸಾಂಸ್ಕೃತಿಕ ನಾಯಕನಾಗಿದ್ದರು ಎಂದು ಸ್ಮರಿಸಿದರು. ಸಮಾಜದಲ್ಲಿದ್ದ ಅಸಮಾನತೆ, ಮೂಢನಂಬಿಕೆಯನ್ನು ತೊಲಗಿಸಿ, ಬಂಜಾರ ಸಮಾಜವನ್ನು ಸಮಾಜದ ಮುಖ್ಯವಾಹಿನಿಗೆ ತರಲು ಶ್ರೀಸಂತ

ಸೇವಾಲಾಲ್ ಮಹಾರಾಜರು ಶ್ರಮಿಸಿದ್ದರು ಎಂದು ತುಮಕೂರು ನಗರ ಶಾಸಕ ಜಿ.ಬಿ.ಜೋತಿಗಣೇಶ್ ಹೇಳಿದ್ದಾರೆ. ತುಮಕೂರು ನಗರದ ಬಂಜಾರ ಭವನದಲ್ಲಿ ನಡೆದ ಶ್ರೀಸಂತ ಸೇವಾಲಾಲ್ ಅವರ ೨೮೮ನೇ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಹುಬ್ಬಳ್ಳಿಯ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ಶ್ರೀ ಸಂತ ಸೇವಾಲಾಲ್ ಮಹಾರಾಜರ ಜಯಂತಿ ಅಂಗವಾಗಿ ಸಂಸ್ಥೆಯ ಮುಖ್ಯ ಕಾರ್ಮಿಕ ಕಲ್ಯಾಣಾಧಿಕಾರಿ ಶ್ರೀನಿವಾಸಮೂರ್ತಿ.ಸಿ.ಈ. ಸಂತ ಸೇವಾ ಲಾಲರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೀಪ ಬೆಳಗಿಸುವುದರ ಮೂಲಕ ಜಯಂತಿ ಆಚರಿಸಲಾಯಿತು.

<><><><>

ಕಾಣೆಯಾದ ಆರು ದಿನಗಳ ನಂತರ, ೨೨ ವರ್ಷದ ಭಾರತೀಯ ವಿದ್ಯಾರ್ಥಿ ಸಾಕೇತ್ ಶ್ರೀನಿವಾಸಯ್ಯ ಕ್ಯಾಲಿಫೋರ್ನಿಯಾದಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಕರ್ನಾಟಕದ ಶ್ರೀನಿವಾಸಯ್ಯ, ಬರ್ಕ್ಲಿಯ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದಲ್ಲಿ ರಾಸಾಯನಿಕ ಮತ್ತು ಬಯೋಮಾಲಿಕ್ಯುಲಾರ್ ಎಂಜಿನಿಯರಿಂಗ್‌ನಲ್ಲಿ ಸ್ನಾತಕೋತ್ತರ ಪದವಿ ಅಧ್ಯಯನ ಮಾಡುತ್ತಿದ್ದರು. ಫೆಬ್ರವರಿ ೯ ರಂದು ಕ್ಯಾಂಪಸ್‌ನಿಂದ ಸುಮಾರು ಒಂದು ಕಿಲೋಮೀಟರ್ ದೂರದಲ್ಲಿ ಅವರನ್ನು ಕೊನೆಯ ಬಾರಿಗೆ ಪರಿಚಿತರೊಬ್ಬರು ನೋಡಿದ್ದರು. ಲೇಕ್ ಅಂಜಾ ಮತ್ತು ಬರ್ಕ್ಲಿ ಬೆಟ್ಟಗಳ ಪ್ರದೇಶಗಳಲ್ಲಿ ಅವರಿಗಾಗಿ ಹುಡುಕಾಟ ನಡೆಸಲಾಗಿತ್ತು. ಸ್ಥಳೀಯ ಅಧಿಕಾರಿಗಳು ಅವರ ಮೃತದೇಹವನ್ನು ವಶಪಡಿಸಿಕೊಂಡಿದ್ದಾರೆ. ಸಾಧ್ಯವಾದಷ್ಟು ಬೇಗ ಅವರ ಮೃತದೇಹವನ್ನು ಭಾರತಕ್ಕೆ ರವಾನಿಸಲು ಅಗತ್ಯವಿರುವ ಎಲ್ಲಾ ರೀತಿಯ ಸಹಾಯ ಒದಗಿಸಲಾಗುವುದು ಎಂದು ಸ್ಯಾನ್ ಫ್ರಾನ್ಸಿಸ್ಕೋದಲ್ಲಿರುವ ಭಾರತೀಯ ದೂತಾವಾಸ ಕಚೇರಿ ತಿಳಿಸಿದೆ. ಐಐಟಿ ಮದ್ರಾಸ್‌ನ ಹಳೆಯ ವಿದ್ಯಾರ್ಥಿ ಶ್ರೀನಿವಾಸಯ್ಯ ಅವರು ಬೆಂಗಳೂರಿನ ಶ್ರೀ ವಾಣಿ ಶಿಕ್ಷಣ ಕೇಂದ್ರದಲ್ಲಿ ವ್ಯಾಸಂಗ ಮಾಡಿದ್ದರು.

<><><><>

ಕೊಲೊಂಬೋದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎ ಗುಂಪಿನ ಪಂದ್ಯದಲ್ಲಿ ಭಾರತ ತಂಡ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ, ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಪ್ರಾರಂಭವಾಗಲಿದೆ. ಉಭಯ ತಂಡಗಳು ಎರಡು ಪಂದ್ಯಗಳಿಂದ ತಲಾ ೪ ಅಂಕಗಳನ್ನು ಗಳಿಸಿವೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಸಿ ಗುಂಪಿನ ಪಂದ್ಯದಲ್ಲಿ ಟಾಸ್

ಸೋತು ಮೊದಲು ಬ್ಯಾಟಿಂಗ್ ಮಾಡಿದ ನೇಪಾಳ ತಂಡ, ವೆಸ್ಟ್ ಇಂಡೀಸ್‌ಗೆ ೧೩೪ ರನ್‌ಗಳ ಗೆಲುವಿನ ಗುರಿ ನೀಡಿದೆ. ನೇಪಾಳ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೩೩ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿರುವ ವೆಸ್ಟ್ ಇಂಡೀಡ್ ಇತ್ತೀಚಿನ ವರದಿ ಬಂದಾಗ ೧೫.೨ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೩೪ ರನ್ ಮಾಡಿ ಆಡುತ್ತಿದೆ. ಮಧ್ಯಾಹ್ನ ೩ ಗಂಟೆಗೆ ಚೆನ್ನೈನಲ್ಲಿ ಆರಂಭವಾಗಲಿರುವ ಎ ಗುಂಪಿನ ಮತ್ತೊಂದು ಪಂದ್ಯದಲ್ಲಿ ಅಮೆರಿಕ ಹಾಗೂ ನಮಿಬಿಯಾ ಮುಖಾಮುಖಿಯಾಗಲಿವೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>